## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಪರಿಷ್ಕೃತ ಅಂದಾಜು ಪಟ್ಟಿಯ ಪ್ಯಾಕೇಜ್-1 ಮತ್ತು ಪ್ಯಾಕೇಜ್-2ನ ಪರಿಶೀಲನಾ ವರದಿ ನೀಡಲು ತಾಂತ್ರಿಕ ಸಮಿತಿಯನ್ನು ರಚಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 82 ಜಿಪಸ 2018, ದಿನಾಂಕ:06-03-2018.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 130 ಜಿಪಸ 2018, ದಿನಾಂಕ:11-07-2018.
3. ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಇವರ ಆಡಳಿತಾತ್ಮಕ ಆದೇಶ ಸಂಖ್ಯೆ:/2018-19/04, ದಿನಾಂಕ:24-07-2018.
4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 103 ಜಿಪಸ 2018, ದಿನಾಂಕ:21-06-2019.
5. ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಇವರ ಆಡಳಿತಾತ್ಮಕ ಆದೇಶ ಸಂಖ್ಯೆ:ಆರ್.ಡಿ.ಪಿ.ಆರ್.ಯು 08/1 ಮತ್ತು 2 ತಾಂತ್ರಿಕ 2019, ದಿನಾಂಕ: 13-08-2019.
6. ಕುಲಸಚಿವರು, ಕ.ರಾ.ಗ್ರಾ ಮತ್ತು ಪಂ.ರಾಜ್ ವಿಶ್ವವಿದ್ಯಾಲಯ, ಗದಗ ಇವರ ಪತ್ರ ಸಂಖ್ಯೆ:ಆರ್‌ಡಿಪಿಆರ್‌ಯು 27 ತಾಂತ್ರಿಕ 2018/2021-22/662, ದಿನಾಂಕ:10-03-2022.
7. ಕುಲಸಚಿವರು, ಕ.ರಾ.ಗ್ರಾ ಮತ್ತು ಪಂ.ರಾಜ್ ವಿಶ್ವವಿದ್ಯಾಲಯ, ಗದಗ ಇವರ ಪತ್ರ ಸಂಖ್ಯೆ:ಆರ್‌ಡಿಪಿಆರ್‌ಯು 25 ತಾಂತ್ರಿಕ 2019/2022-23, ದಿನಾಂಕ:04-06-2022.

**ಪ್ರಸ್ತಾವನೆ:**

ಮೇಲೆ ಓದಲಾದ (1) ಮತ್ತು (2)ರ ಆದೇಶಗಳನ್ವಯ 2017-18ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ನೂತನ ಶಾಲಾ ಕಟ್ಟಡ ಕಾಮಗಾರಿ ಮತ್ತು ನೂತನ ಬಾಲಕರ ವಸತಿ ನಿಲಯ ಕಾಮಗಾರಿಗಳಿಗಾಗಿ ಅನುಕ್ರಮವಾಗಿ ರೂ.999.80 ಲಕ್ಷ ಮತ್ತು ರೂ.989.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಸರ್ಕಾರದ ಮಂಜೂರಾತಿ ನೀಡಲಾಗಿದೆ ಹಾಗೂ ಮೇಲೆ ಓದಲಾದ (3)ರ ಆದೇಶದಲ್ಲಿ ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಇವರು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಆವರಣದಲ್ಲಿ ಉದ್ದೇಶಿತ ನೂತನ ಬಾಲಕರ ಭೋಜನಾ ನಿಲಯ ಕಟ್ಟಡದ ನಿರ್ಮಾಣ ಕಾಮಗಾರಿಯ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಮಂಜೂರಾತಿ ಆದೇಶ ಹೊರಡಿಸಿರುತ್ತಾರೆ.

ಮೇಲೆ ಓದಲಾದ(4)ರ ಆದೇಶದನ್ವಯ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ನೂತನ ಆವರಣದಲ್ಲಿ ಪ್ಯಾಕೇಜ್-2ರ ಅಡಿಯಲ್ಲಿ ಕೈಗೊಂಡಿರುವ ಬಾಲಕಿಯರ ವಸತಿ ನಿಲಯದ ಕಟ್ಟಡ ಕಾಮಗಾರಿಗಾಗಿ ರೂ.995.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿ ಸರ್ಕಾರದ ಮಂಜೂರಾತಿ ನೀಡಲಾಗಿದೆ ಹಾಗೂ ಮೇಲೆ ಓದಲಾದ (5)ರ ಆದೇಶದಲ್ಲಿ ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ

ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಇವರು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಆವರಣದಲ್ಲಿ 'ಸಿ' ಟೈಪ್ ಹಾಗೂ 'ಡಿ' ಟೈಪ್ ಕ್ವಾಟ್ರಸ್ ಕಟ್ಟಡ ನಿರ್ಮಾಣ ಕಾಮಗಾರಿಗೆ ಆಡಳಿತಾತ್ಮಕ ಮಂಜೂರಾತಿ ಆದೇಶ ಹೊರಡಿಸಿರುತ್ತಾರೆ.

ಮೇಲೆ ಓದಲಾದ(6) ಮತ್ತು (7)ರ ಪತ್ರಗಳಲ್ಲಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ನೂತನ ವಿಶ್ವವಿದ್ಯಾಲಯದ ಆವರಣದಲ್ಲಿ ಪ್ಯಾಕೇಜ್-1ರಡಿ ಕೈಗೊಂಡಿರುವ ಶಾಲಾ ಕಟ್ಟಡ ಕಾಮಗಾರಿ, ನೂತನ ಬಾಲಕರ ವಸತಿ ನಿಲಯ ಕಾಮಗಾರಿ ಮತ್ತು ಬಾಲಕರ ಭೋಜನಾ ನಿಲಯ ಕಟ್ಟಡ ನಿರ್ಮಾಣ ಕಾಮಗಾರಿಗಳ ಹಾಗೂ ಪ್ಯಾಕೇಜ್-2ರಡಿ ಕೈಗೊಂಡಿರುವ ಬಾಲಕಿಯರ ವಸತಿ ನಿಲಯದ ಕಟ್ಟಡ, 'ಸಿ' ಟೈಪ್ ಕ್ವಾಟ್ರಸ್ ಕಟ್ಟಡ ಹಾಗೂ 'ಡಿ' ಟೈಪ್ ಕ್ವಾಟ್ರಸ್ ಕಟ್ಟಡ ನಿರ್ಮಾಣ ಕಾಮಗಾರಿಗಳ ಪರಿಷ್ಕೃತ ಅಂದಾಜು ಪಟ್ಟಿಯನ್ನು ಅನುಮೋದಿಸುವಂತೆ ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಇವರು ಕೋರಿರುತ್ತಾರೆ. ಈ ಸಂಬಂಧ ಸದರಿ ಕಾಮಗಾರಿಗಳ ಪರಿಶೀಲನಾ ವರದಿ ನೀಡುವ ಕುರಿತು ತಾಂತ್ರಿಕ ಸಮಿತಿಯನ್ನು ರಚಿಸಲು ಸರ್ಕಾರವು ನಿರ್ಧರಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 167 ಜಿಪಸ 2022, ಬೆಂಗಳೂರು, ದಿನಾಂಕ:14-09-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ನೂತನ ವಿಶ್ವವಿದ್ಯಾಲಯದ ಆವರಣದಲ್ಲಿ ಪ್ಯಾಕೇಜ್-1ರಡಿ ಕೈಗೊಂಡಿರುವ ಶಾಲಾ ಕಟ್ಟಡ ಕಾಮಗಾರಿ, ನೂತನ ಬಾಲಕರ ವಸತಿ ನಿಲಯ ಕಾಮಗಾರಿ ಮತ್ತು ಬಾಲಕರ ಭೋಜನಾ ನಿಲಯ ಕಟ್ಟಡ ನಿರ್ಮಾಣ ಕಾಮಗಾರಿಗಳ ಹಾಗೂ ಪ್ಯಾಕೇಜ್-2ರಡಿ ಕೈಗೊಂಡಿರುವ ಬಾಲಕಿಯರ ವಸತಿ ನಿಲಯದ ಕಟ್ಟಡ, 'ಸಿ' ಟೈಪ್ ಕ್ವಾಟ್ರಸ್ ಕಟ್ಟಡ ಹಾಗೂ 'ಡಿ' ಟೈಪ್ ಕ್ವಾಟ್ರಸ್ ಕಟ್ಟಡ ನಿರ್ಮಾಣ ಕಾಮಗಾರಿಗಳ ಪರಿಷ್ಕೃತ ಅಂದಾಜು ಪಟ್ಟಿಯ ಪರಿಶೀಲನಾ ವರದಿಯನ್ನು ನೀಡುವ ಸಂಬಂಧ ಮುಖ್ಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಸದಸ್ಯರನ್ನೊಳಗೊಂಡ ತಾಂತ್ರಿಕ ಸಮಿತಿಯನ್ನು ರಚಿಸಿ ಆದೇಶಿಸಿದೆ:-

| | | |
|---|---|---|
| 1. | ಮುಖ್ಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು | ಅಧ್ಯಕ್ಷರು |
| 2. | ಶ್ರೀ ಚಂದ್ರಶೇಖರ ಮಸಗುಪ್ಪಿ, ನಿವೃತ್ತ ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ | ಸದಸ್ಯರು |
| 3. | ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಧಾರವಾಡ | ಸದಸ್ಯರು |
| 4. | ಶ್ರೀ ಅಂಬರೀಶ್, ಮುಖ್ಯ ಅಭಿಯಂತರರು, ಆಯ್ಕೆ ಮಾಡಿದ 3 ನೇ ಸಂಸ್ಥೆಯ ತಜ್ಞ ಸಲಹೆಗಾರರು | ಸದಸ್ಯರು |
| 5. | ಡಾ. ಸತೀಶ್ ಜ್ಞಾನಪಂತರ್, ವಿಭಾಗದ ಮುಖ್ಯಸ್ಥರು, ಸಿವಿಲ್ ಇಂಜಿನಿಯರಿಂಗ್ ವಿಭಾಗ, ಸಿವಿಲ್ ಇಂಜಿನಿಯರಿಂಗ್ ಕಾಲೇಜು, ಹುಲಕೋಟಿ | ಸದಸ್ಯರು |
| 6. | ಕಾರ್ಯನಿರ್ವಾಹಕ ಅಭಿಯಂತರರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ | ಸದಸ್ಯರು |
| 7. | ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು | ಸದಸ್ಯರು |

| | | |
|---|---|---|
| 8. | ಸರ್ಕಾರದ ಜಂಟಿ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು | ಸಂಚಾಲಕರು |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ,

14/9/22

(ಎಂ.ಎಂ.ರಾಜು)

ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

14/9/2022

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯ, ಗದಗ.
5. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ಮುಖ್ಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
7. ಸಮಿತಿಯ ಸದಸ್ಯರುಗಳಿಗೆ (ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ವಿಶ್ವವಿದ್ಯಾಲಯ, ಗದಗ ರವರ ಮುಖಾಂತರ).
8. ಸರ್ಕಾರದ ಜಂಟಿ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
9. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
10. ಉಪ ನಿರ್ದೇಶಕರು, ಜಿಲ್ಲಾ ಖಜಾನೆ, ಗದಗ.
11. ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು/ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು.
12. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

**ಪ್ರತಿಯನ್ನು ಮಾಹಿತಿಗಾಗಿ:-**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿ(ಜಿ.ಪಂ), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.